**ಕರ್ನಾಟಕ ಸರ್ಕಾರ**

ಸಂಖ್ಯೆ: ಆಸಾಂನಿ/15/ಮಾಸಪ/ಎಆರ್‌ಸಿ/2016-17

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು,
ದಿನಾಂಕ: 25ನೇ ಜುಲೈ 2016

****ಸುತ್ತೋಲೆ****

ವಿಷಯ: ಸಮಾಜ ಕಲ್ಯಾಣ/ ಪರಿಶಿಷ್ಟ ವರ್ಗಗಳ ಕಲ್ಯಾಣ/ಹಿಂದುಳಿದ ವರ್ಗಗಳ ಕಲ್ಯಾಣ/ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳು/ಆಶ್ರಮ ಶಾಲೆಗಳು/ ಮುರಾರ್ಜಿದೇಸಾಯಿ ವಸತಿ ಶಾಲೆಗಳು/ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು/ಏಕಲವ್ಯ ವಸತಿ ಶಾಲೆಗಳು/ ಅನುದಾನಿತ ವಸತಿ ನಿಲಯ ಹಾಗೂ ಶಿಕ್ಷಣ ಇಲಾಖೆಯ ಕಸ್ತೂರಿಬಾ ಬಾಲಕಿಯ ವಸತಿ ಶಾಲೆಗಳ ನಿರ್ವಹಣೆ ಬಗ್ಗೆ ಸಮೀಕ್ಷೆ ಮತ್ತು 16ನೇ ಸುತ್ತಿನಲ್ಲಿ ಕೈಗೊಳ್ಳುವ ಮಾದರಿ ಸಮೀಕ್ಷೆ ಕುರಿತು.

ಉಲ್ಲೇಖ: 2016-17ನೇ ಸಾಲಿನಲ್ಲಿ ಮುಂದುವರೆದ ಕಾರ್ಯಕ್ರಮಗಳ ಸರ್ಕಾರದ ಆದೇಶ ಸಂಖ್ಯೆ: ಪಿಡಿ/92/ಎಸ್‌ಎಂಸಿ/2016, ಬೆಂಗಳೂರು, ದಿನಾಂಕ: 01.04.2016.

**********

I. ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯವು ಸಮಾಜ ಕಲ್ಯಾಣ/ ಪರಿಶಿಷ್ಟ ವರ್ಗಗಳ ಕಲ್ಯಾಣ/ಹಿಂದುಳಿದ ವರ್ಗಗಳ ಕಲ್ಯಾಣ/ಅಲ್ಪಸಂಖ್ಯಾತರ ಕಲ್ಯಾಣ/ಶಿಕ್ಷಣ ಇಲಾಖೆ/ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ/ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳು/ಆಶ್ರಮ ಶಾಲೆಗಳು/ ಮುರಾರ್ಜಿದೇಸಾಯಿ ವಸತಿ ಶಾಲೆಗಳು/ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು/ಏಕಲವ್ಯ ವಸತಿ ಶಾಲೆಗಳು/ ಅನುದಾನಿತ ವಸತಿ ನಿಲಯ ಹಾಗೂ ಶಿಕ್ಷಣ ಇಲಾಖೆಯ ಕಸ್ತೂರ ಬಾ ಬಾಲಕಿಯ ವಸತಿ ಶಾಲೆಗಳ ನಿರ್ವಹಣೆ ಬಗ್ಗೆ ಸಮಗ್ರವಾಗಿ ವಸತಿ ನಿಲಯಗಳಲ್ಲಿ ಇರುವ ಮೂಲಭೂತ ಸೌಕರ್ಯಗಳು ಹಾಗೂ ಇತರೆ ಸೌಕರ್ಯಗಳ ಬಗ್ಗೆ ವಾಸ್ತವಾಂಶದ ಮಾಹಿತಿಯನ್ನು ಕಲೆಹಾಕಿ ಇಲಾಖಾವಾರು ವಸತಿನಿಲಯಗಳ ವರದಿಯನ್ನು ತಯಾರಿಸಿ ಸೂಕ್ತ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ. ಮುಂದುವರೆದು, ವಸತಿ ನಿಲಯಗಳ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳ ಸಮೀಕ್ಷೆಗಳು ಉಪಯುಕ್ತವಾದ ಸಮೀಕ್ಷೆಗಳಾಗಿದ್ದು, ಸಮೀಕ್ಷೆಗಳಿಂದ ಹೊರಹೊಮ್ಮುವ, ಗಮನಿಸಲಾಗುವ ನ್ಯೂನತೆಗಳು/ಉಪಯುಕ್ತ ಅಂಶಗಳನ್ನು ಆಧರಿಸಿ, ವಸತಿನಿಲಯಗಳ ಸುಧಾರಣೆಗೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳಲ್ಲಿನ ಯೋಜನೆಗಳಿಗೆ ಅನುಕೂಲವಾಗುವಂತೆ ಸಂಬಂಧಿಸಿದ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳಿಗೆ ವಿಸ್ತೃತ ವರದಿಯನ್ನು ಕಳುಹಿಸಿಕೊಡಲಾಗುವುದು.

II. **2016-17ನೇ ಸಾಲಿನಲ್ಲಿ ಕೈಗೊಳ್ಳುವ ಅಭಿವೃದ್ಧಿ ಕಾರ್ಯಕ್ರಮಗಳ ಮೇಲಿನ 16ನೇ ಸುತ್ತಿನ ಮಾದರಿ ಸಮೀಕ್ಷೆಯಲ್ಲಿ**

1. ಗ್ರಾಮೀಣ ಶೌಚಾಲಯಗಳ ನಿರ್ಮಾಣ (ಸ್ವಚ್ಛ ಭಾರತ್ - ಗ್ರಾಮೀಣ)
2. ಪ್ರಾಥಮಿಕ/ಮಾಧ್ಯಮಿಕ/ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಶೂ ಮತ್ತು ಕಾಲುಚೀಲಗಳ ವಿತರಣೆ ಯೋಜನೆ

...2

3. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗ/ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ DBT (Direct Benefit Transfer) ಮುಖಾಂತರ ವಿದ್ಯಾರ್ಥಿ ವೇತನ ವಿತರಣೆ ಯೋಜನೆ ಮತ್ತು
4. ಕಾಮಗಾರಿ ಆಧಾರಿತ ಯೋಜನೆಯಾದ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾಮಗಾರಿಗಳ ಮೇಲೆ ಮಾದರಿ ಸಮೀಕ್ಷೆಯನ್ನು ಕೈಗೊಂಡು ಸಮೀಕ್ಷೆಯಲ್ಲಿ ಕಂಡುಬಂದ ವಾಸ್ತವಾಂಶದ ಅಂಶಗಳ ಮೇಲೆ ವರದಿಯನ್ನು ತಯಾರಿಸಿ ಸರ್ಕಾರಕ್ಕೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಲಾಗುತ್ತದೆ.

ಆದಕಾರಣ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯವು ಉದ್ದೇಶಿತ ಕಾರ್ಯಕ್ರಮದ ಅಡಿಯಲ್ಲಿ, ಸಮೀಕ್ಷೆಯ ಕ್ಷೇತ್ರಕಾರ್ಯ ಮತ್ತು ಮೇಲ್ವಿಚಾರಣೆ ಕಾರ್ಯವನ್ನು **"ಆಗಸ್ಟ್-2016ರ ಮತ್ತು ಸೆಪ್ಟೆಂಬರ್-2016"ರ** ಅವಧಿಯಲ್ಲಿ ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ, ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ/ತಾಲ್ಲೂಕು ಮಟ್ಟದ/ ಕ್ಷೇತ್ರ ಮಟ್ಟದ ಅಧಿಕಾರಿಗಳು **"ಮೇಲಿನ ಸಮೀಕ್ಷೆಗೆ ನಿಯೋಜಿಸಲಾದ ಅಧಿಕಾರಿಗಳಿಗೆ ಪೂರ್ಣ ಸಹಕಾರವನ್ನು ನೀಡಿ, ಕ್ಷೇತ್ರಕಾರ್ಯಕರ್ತರಿಗೆ ಮತ್ತು ಮೇಲ್ವಿಚಾರಣಾಧಿಕಾರಿಗಳಿಗೆ ಅವಶ್ಯವಿರುವ ಮಾಹಿತಿ ಮತ್ತು ಸಂಬಂಧಿಸಿದ ದಾಖಾಲಾತಿಗಳನ್ನು ಒದಗಿಸುವುದು"** ಹಾಗೂ ಸಮೀಕ್ಷಾ ಕಾರ್ಯವನ್ನು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಅನುಕೂಲವಾಗುವಂತೆ "ಕ್ರಮ ಸಂಖ್ಯೆ II ರಲ್ಲಿ ನಮೂದಿಸಿರುವ ಕಾರ್ಯಕ್ರಮಗಳ ಸಮೀಕ್ಷಾ ಕಾರ್ಯಕ್ಕೆ ನಿಯೋಜಿಸಲ್ಪಟ್ಟ ಅಧಿಕಾರಿಗಳಿಗೆ ವಾಹನದ **ಸೌಲಭ್ಯವನ್ನು ಸಹ ಒದಗಿಸಲು ಸಂಬಂಧಪಟ್ಟವರಿಗೆ ಸೂಚಿಸುವುದು."**

ರಾಜ್ಯದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭ್ಯುದಯಕ್ಕಾಗಿ ಅನುಷ್ಠಾನಗೊಳಿಸಲಾಗುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಫಲವು ಸಂಬಂಧಿಸಿದವರಿಗೆ ದೊರಕುತ್ತಿದೆಯೇ?, ಸಂಬಂಧಿಸಿದ ಪ್ರದೇಶಾಭಿವೃದ್ಧಿಗೆ ಸಹಕಾರಿಯಾಗಿದೆಯೇ? ಹಾಗೂ ಈ ಯೋಜನೆಯ ಹಿಂದಿನ ಸರ್ಕಾರದ ಧ್ಯೇಯೋದ್ದೇಶವು ಕಾರ್ಯಗತವಾಗುತ್ತಿದೆಯೇ? ಎಂಬುದನ್ನು ಅರಿಯಲು ಸಮೀಕ್ಷೆಗಳನ್ನು ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸಮೀಕ್ಷಾ ಕಾರ್ಯಗಳಿಗೆ ಪ್ರಮುಖ ಆದ್ಯತೆಯನ್ನು ನೀಡತಕ್ಕದ್ದು.

2.8.16

(ಅರವಿಂದ್ ಜಾಧವ್)
ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ

ಗೆ,

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೂತನ ಸಾರ್ವಜನಿಕ ಕಛೇರಿಗಳ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-560001.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-560001.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಕೃಷಿ ಭವನ, ಹಡ್ಸನ್ ಸರ್ಕಲ್, ನೃಪತುಂಗ ರಸ್ತೆ, ಬೆಂಗಳೂರು-560001.

4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಕೆ.ಹೆಚ್.ಬಿ. ಕಾಂಪ್ಲೆಕ್ಸ್, 2ನೇ ಮಹಡಿ, ಬೆಂಗಳೂರು-560001.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಡಿ. ದೇವರಾಜು ಅರಸು ಭವನ, ನಂ 16ಡಿ, 4ನೇ ಮಹಡಿ, ಮಿಲ್ಲರ್‌ಟ್ಯಾಂಕ್ ಬಂಡ್ ರಸ್ತೆ, ವಸಂತನಗರ, ಬೆಂಗಳೂರು-560052.
6. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ. ಗೋಪುರ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-560001.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ನಂ. 8, ಎಂಎಸ್‌ಬಿ-1, 6& 7ನೇ ಮಹಡಿ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-560052.
8. ಕಾರ್ಯದರ್ಶಿಗಳು, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಅಭಿವೃದ್ಧಿ ಭವನ, ಐವನ್-ಎ-ಶಾಹಿ, ಕಲ್ಬುರ್ಗಿ-585102.
9. ನಿರ್ದೇಶಕರು, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸ್ಪೆಷಲ್ ಸೆಲ್, ಡಿಪಿಡಿ ವಿಭಾಗ, 3ನೇ ಗೇಟ್, 7ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-560001.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,
11. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
12. ಸಂಬಂಧಿಸಿದ ಇಲಾಖೆಗಳ ಯೋಜನೆಯ ಜಿಲ್ಲಾ ಅನುಷ್ಠಾನಾಧಿಕಾರಿಗಳು/ಸಾರ್ವಜನಿಕ ಶಿಕ್ಷಣ ಇಲಾಖೆ/ಸಮಾಜ ಕಲ್ಯಾಣ ಇಲಾಖೆ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
13. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು 560001.
14. ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.

<u>ಪ್ರತಿಯನ್ನು:-</u>

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ /ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ /ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ/ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ/ಗ್ರಾಮೀಣ ಕುಡಿಯುವ ನೀರು ಮತ್ತು ನೈಮಲ್ಯ ಇಲಾಖೆ/ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು, ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.